# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 2257

ಸದಸ್ಯರ ಹೆಸರು : ಡಾ. ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 21/03/2022.

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; | ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ತತ್ಸಮಾನ ವೃಂದದ ಖಾಲಿ ಹುದ್ದೆಗಳಿಗೆ 2019-2020 ಹಾಗೂ 2020-2021ನೇ ಸಾಲಿನಲ್ಲಿ ಈ ಕೆಳಕಂಡಂತೆ ಬೆಂಗಳೂರು ಹಾಗೂ ಮೈಸೂರು ವಿಭಾಗಗಳ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ 'ಬಿ' ವೃಂದದ ಹುದ್ದೆಗಳಿಗೆ ಮುಂಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದೆ. |

| ಅವಧಿ | ಬೆಂಗಳೂರು ವಿಭಾಗ | ಮೈಸೂರು ವಿಭಾಗ | ಒಟ್ಟು |
|---|---|---|---|
| 2018-19 | ಬಡ್ತಿ ನೀಡಿರುವುದಿಲ್ಲ | | |
| 2019-20 | 234 | 347 | 581 |
| 2020-21 | 56 | 70 | 126 |
| **ಒಟ್ಟು** | **290** | **417** | **707** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಕಳೆದ 25 ವರ್ಷಗಳಿಗೂ ಮೇಲ್ಪಟ್ಟು ಕಾರ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಇದುವರೆವಿಗೂ ಒಂದೂ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜೇಷ್ಠತೆ ಆಧಾರದ ಮೇಲೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು / ತತ್ಸಮಾನ ಬಿ ವೃಂದದ ಹುದ್ದೆಗಳಿಗೆ ಮುಂಬಡ್ತಿ ನೀಡಲಾಗುತ್ತಿದೆ. |

| | | |
|---|---|---|
| ಇ) | ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಹಾಲಿ ಖಾಲಿ ಇರುವ ಮುಖ್ಯೋಪಾಧ್ಯಾಯರ ಹುದ್ದೆಗಳೆಷ್ಟು; (ವಿವರಗಳನ್ನು ನೀಡುವುದು) | ಪ್ರಸ್ತುತ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಬಡ್ತಿ ಮೂಲಕ ತುಂಬಬೇಕಾದ ಹುದ್ದೆಗಳು - 356. |
| ಈ | ಮೇಲ್ಕಂಡ ವಿಭಾಗಗಳಲ್ಲಿ ಅರ್ಹ ಅಭ್ಯರ್ಥಿಗಳಿದ್ದರೂ ಇದುವರೆವಿಗೂ ಖಾಲಿ ಹುದ್ದೆಗಳಿಗೆ ಪದೋನ್ನತಿಯನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; ಯಾವ ಕಾಲಮಿತಿಯೊಳಗೆ ಮುಂಬಡ್ತಿ ಪ್ರಕ್ರಿಯೆಯನ್ನು ಸರ್ಕಾರ ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು) | ಪ್ರಸ್ತುತ ಪ್ರೌಢಶಾಲಾ ಶಿಕ್ಷಕರ ಜೇಷ್ಠತಾ ಪಟ್ಟಿಯ ಅಂತಿಮ ಹಂತದ ಪ್ರಕ್ರಿಯೆ ಚಾಲನೆಯಲ್ಲಿದ್ದು, ಸದರಿ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟವಾದ ನಂತರ ನಿಯಮಾನುಸಾರ ಬಡ್ತಿ ನೀಡಲು ಕ್ರಮವಹಿಸಲಾಗುವುದು. |

ಸಂಖ್ಯೆ: ಇಪಿ 53 ಎಸ್‌ಓಹೆಚ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು